ಕರ್ನಾಟಕ ಸರ್ಕಾರ
(ಕಾರಾಗೃಹಗಳ ಇಲಾಖೆ)

ಸಂಖ್ಯೆ:ಆಭಾಯೋ/ಸಿಆರ್-04/2018-19

ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು
ಕಾರಾಗೃಹಗಳ ಮಹಾನಿರೀಕ್ಷಕರವರ ಕಛೇರಿ,
ಕರ್ನಾಟಕ ರಾಜ್ಯ, ಬೆಂಗಳೂರು-560 009.
ದಿನಾಂಕ:23 .07.2018

## ಸುತ್ತೋಲೆ

ವಿಷಯ:ಕಾರಾಗೃಹಗಳ ಇಲಾಖಾ ಅಧಿಕಾರಿ/ಸಿಬ್ಬಂದಿಗಳಿಗೆ ವಾರ್ಷಿಕ ಆರೋಗ್ಯ ತಪಾಸಣೆಗಾಗಿ ರೂ.1000/-ಗಳನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ 43 ಪಿಆರ್‌ಇ 2018 ದಿನಾಂಕ:05.07.2018.

*** ** ***

ಕಾರಾಗೃಹ ಇಲಾಖಾ ಅಧಿಕಾರಿ/ಸಿಬ್ಬಂದಿಗಳಿಗೆ (ಲಿಪಿಕ ಸಿಬ್ಬಂದಿಗಳನ್ನು ಹೊರತುಪಡಿಸಿ) ಪ್ರತಿಯೊಬ್ಬರಿಗೆ ಆರೋಗ್ಯ ತಪಾಸಣೆಗಾಗಿ ವಾರ್ಷಿಕವಾಗಿ ₹1,000.00 (ರೂಪಾಯಿ ಒಂದು ಸಾವಿರ ಮಾತ್ರ) ವೆಚ್ಚ ಭರಿಸಲು ಉಲ್ಲೇಖದ ಸರ್ಕಾರದ ಪತ್ರದಲ್ಲಿ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 2056-00-101-0-01 ಸೆರೆಮನೆಗಳು 021 ವೈದ್ಯಕೀಯ ವೆಚ್ಚದ ಮರುಪಾವತಿಯಡಿಯಲ್ಲಿ ಭರಿಸಲು ಸಹಮತಿಯನ್ನು ನೀಡಲಾಗಿರುತ್ತದೆ. (ಆದೇಶದ ಪ್ರತಿಯನ್ನು ಲಗತ್ತಿಸಿದೆ)

ಕಾರಾಗೃಹ ಇಲಾಖಾ ಅಧಿಕಾರಿ/ಸಿಬ್ಬಂದಿಗಳಿಗೆ (ಲಿಪಿಕ ಸಿಬ್ಬಂದಿಗಳನ್ನು ಹೊರತುಪಡಿಸಿ) ಈ ಕೆಳಕಂಡ ಪ್ರಮುಖ ವೈದ್ಯಕೀಯ ಪರೀಕ್ಷೆಗಳನ್ನು ಪ್ರತಿವರ್ಷವೂ ಮಾಡಿಸಿಕೊಳ್ಳುವಂತೆ ಸೂಚಿಸಿದೆ.

1. B.P
2. Blood & Urine Sugar Test
3. Kidney Function Test
4. Ultra Sound Test
5. ECG
6. Cholesterol
7. Liver Function Test
8. Optholmic Investigation

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963ರ ಪ್ರಕಾರ ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳಲ್ಲಿ ಅಥವಾ ಆರೋಗ್ಯಭಾಗ್ಯ ಯೋಜನೆಯಡಿಯಲ್ಲಿ ಗುರುತಿಸಲಾದ ಆಸ್ಪತ್ರೆಗಳಲ್ಲಿ ಮಾತ್ರ ತಪಾಸಣೆ ಮಾಡಿಸುವುದು. ಯಾವುದೇ ಕಾರಣಕ್ಕೂ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮ 1963ರ ಪ್ರಕಾರ ಸರ್ಕಾರದಿಂದ ಮಾನ್ಯತೆ ಹೊಂದಿರದ ಆಸ್ಪತ್ರೆಗಳಲ್ಲಿ ಅಥವಾ ಆರೋಗ್ಯಭಾಗ್ಯ ಯೋಜನೆಯಡಿಯಲ್ಲಿ ಗುರುತಿಸದೇ ಇರುವ ಆಸ್ಪತ್ರೆಗಳಲ್ಲಿ ತಪಾಸಣೆ ಮಾಡಿಸತಕ್ಕದ್ದಲ್ಲ.

ಎಲ್ಲಾ ಕಾರಾಗೃಹಗಳ ಮುಖ್ಯಸ್ಥರು ಪ್ರತಿ ವರ್ಷ ಫೆಬ್ರವರಿ ಅಥವಾ ಮಾರ್ಚ್ ತಿಂಗಳಲ್ಲಿ ಕಡ್ಡಾಯವಾಗಿ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ವೈದ್ಯಕೀಯ ಪರೀಕ್ಷೆಗೆ ಒಳಪಡಿಸತಕ್ಕದ್ದು.

ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳಲ್ಲಿ ಅಥವಾ ಆರೋಗ್ಯಭಾಗ್ಯ ಯೋಜನೆಯಡಿಯಲ್ಲಿ ಗುರುತಿಸಲಾದ ಆಸ್ಪತ್ರೆಗಳ ಮುಖ್ಯಸ್ಥರೊಂದಿಗೆ ಸಮಾಲೋಚನೆ ಮಾಡಿ ಆಯಾ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಅತೀ ಉತ್ತಮವಾದ ಆಸ್ಪತ್ರೆಗಳನ್ನು ಆಯ್ಕೆ ಮಾಡಿಕೊಂಡು ಒಪ್ಪಂದದ ಪ್ರಕಾರ ಅಧಿಕಾರಿ/ಸಿಬ್ಬಂದಿಗಳನ್ನು ಪ್ರತಿವರ್ಷವೂ ವೈದ್ಯಕೀಯ ಪರೀಕ್ಷೆಗೆ ಒಳಪಡಿಸತಕ್ಕದ್ದು.

ಅಧಿಕಾರಿ/ಸಿಬ್ಬಂದಿಗಳಿಗೆ ಪ್ರತಿನಿತ್ಯ ಸರದಿಯ ಪ್ರಕಾರ ಸಂಸ್ಥೆಯ ಮುಖ್ಯಸ್ಥರುಗಳ ಮೇಲ್ವಿಚಾರಣೆಯಲ್ಲಿ ಆಸ್ಪತ್ರೆಗಳಿಗೆ ಕಳುಹಿಸಿ ವಿವರವಾದ ವೈದ್ಯಕೀಯ ತಪಾಸಣೆ ಮಾಡಿಸುವುದು ಹಾಗೂ ವೈದ್ಯಕೀಯ ತಪಾಸಣೆ ಮಾಡಿಸಿದ ನಂತರ ವೈದ್ಯಕೀಯ ಪರೀಕ್ಷೆಯ ಪ್ರಮಾಣ ಪತ್ರವನ್ನು ಪಡೆದು ಆಯಾ ವರ್ಷದ ವಾರ್ಷಿಕ ಕಾರ್ಯನಿರ್ವಹಣಾ ವರದಿಯಲ್ಲಿ ಆರೋಗ್ಯದ ಕಾಲಂನಲ್ಲಿ ನಮೂದಿಸಿ, ನಂತರ ವೈದ್ಯಕೀಯ ತಪಾಸಣಾ ವರದಿಯನ್ನು ಕಾರ್ಯನಿರ್ವಹಣಾ ವರದಿಯೊಂದಿಗೆ ಲಗತ್ತಿಸಿ ಈ ಕಛೇರಿಗೆ ತಪ್ಪದೇ ಸಲ್ಲಿಸತಕ್ಕದ್ದು.

ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದಾಗ, ಅಧಿಕಾರಿ/ಸಿಬ್ಬಂದಿಗಳಿಗೆ ತೀವ್ರತರವಾದ ಖಾಯಿಲೆಗಳು ಪತ್ತೆಯಾದಲ್ಲಿ, ಸರ್ಕಾರದಿಂದ ಮಾನ್ಯತೆ ಹೊಂದಿರುವ ಆಸ್ಪತ್ರೆಗಳಲ್ಲಿ ಅಥವಾ ಆರೋಗ್ಯಭಾಗ್ಯ ಯೋಜನೆಯಡಿಯಲ್ಲಿ ಗುರುತಿಸಲಾದ ಆಸ್ಪತ್ರೆಗಳಿಗೆ ಸೇರಿಸಿ ಹೆಚ್ಚಿನ ಚಿಕಿತ್ಸೆ ಕೊಡಿಸಲು ಕ್ರಮ ಕೈಗೊಳ್ಳುವುದು.

ವೈದ್ಯಕೀಯ ಚಿಕಿತ್ಸೆಗೆ ಸಂಬಂಧಿಸಿದಂತೆ, ಯಾವುದೇ ವೈದ್ಯಕೀಯ ಶುಲ್ಕವನ್ನು ಅಧಿಕಾರಿ/ಸಿಬ್ಬಂದಿಗಳಿಂದ ವಸೂಲು ಮಾಡತಕ್ಕದ್ದಲ್ಲ ಹಾಗೂ ಯಾವುದೇ ಕಾರಣಕ್ಕೂ ಹಣವನ್ನು ಡ್ರಾ ಮಾಡಿ ಸಿಬ್ಬಂದಿಗಳಿಗೆ ನೀಡುವಂತಿಲ್ಲ.

ಅಧಿಕಾರಿ/ಸಿಬ್ಬಂದಿಗಳಿಗೆ ವೈದ್ಯಕೀಯ ಪರೀಕ್ಷೆಯಾದ ನಂತರ ಸರ್ಕಾರದಿಂದ ಮಂಜೂರಾದ ₹1,000.00 (ರೂಪಾಯಿ ಒಂದು ಸಾವಿರ ಮಾತ್ರ)ಗಳನ್ನು ಆಯಾ ಸಂಬಂಧಪಟ್ಟ ಆಸ್ಪತ್ರೆಗಳಿಂದ ಕ್ರೋಢಿಕೃತ ಬಿಲ್ಲುಗಳನ್ನು ಪಡೆದು ಒಂದೇ ಬಾರಿಗೆ ಖಜಾನೆ-2 ರಲ್ಲಿ ಬಿಲ್ಲುಗಳನ್ನು ತಯಾರಿಸಿ ಮೇಲುರುಜುವಿಗಾಗಿ ಪ್ರಧಾನ ಕಛೇರಿಗೆ ಸಲ್ಲಿಸತಕ್ಕದ್ದು.

ಎಲ್ಲಾ ಕಾರಾಗೃಹಗಳ ಮುಖ್ಯಸ್ಥರು ಆಯಾ ಕಾರಾಗೃಹದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಕಡ್ಡಾಯವಾಗಿ ವೈದ್ಯಕೀಯ ಪರೀಕ್ಷೆಗೆ ಒಳಪಡುವಂತೆ ಕ್ರಮ ಕೈಗೊಳ್ಳುವುದು. ಒಂದು ವೇಳೆ ಅಧಿಕಾರಿ/ಸಿಬ್ಬಂದಿಗಳಿಗೆ ವೈದ್ಯಕೀಯ ಪರೀಕ್ಷೆಗೆ ಒಳಪಡಿಸುವಲ್ಲಿ ವಿಫಲವಾದರೆ ಅಥವಾ ನಿರ್ಲಕ್ಷತೆ ತೋರಿಸಿದ್ದಲ್ಲಿ ಅಂತಹ ಅಧೀಕ್ಷಕರ ವಿರುದ್ಧ ಕೆ.ಸಿ.ಎಸ್ ಮತ್ತು ಸಿ.ಸಿ.ಎ ನಿಯಮಗಳನ್ವಯ ಸೂಕ್ತ ಕ್ರಮಕೈಗೊಳ್ಳಲಾಗುವುದು.

ಈ ಸುತ್ತೋಲೆಯ ಪ್ರತಿಯನ್ನು ಎಲ್ಲಾ ಕಾರಾಗೃಹಗಳ ನೋಟಿಸ್ ಬೋರ್ಡಿನಲ್ಲಿ ಕಡ್ಡಾಯವಾಗಿ ಅಳವಡಿಸುವುದು ಮತ್ತು ಈ ಸುತ್ತೋಲೆ ತಲುಪಿದ ಬಗ್ಗೆ ಸ್ವೀಕೃತಿಯನ್ನು ಕಳುಹಿಸತಕ್ಕದ್ದು.

N 23.7.17

(ಎನ್.ಎಸ್.ಮೇಘರಿಖ್)
ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು
ಕಾರಾಗೃಹಗಳ ಮಹಾನಿರೀಕ್ಷಕರು
ಕರ್ನಾಟಕ ರಾಜ್ಯ

ಗೆ,

- ಎಲ್ಲಾ ಮುಖ್ಯ ಅಧೀಕ್ಷಕರು / ಅಧೀಕ್ಷಕರು, ಕೇಂದ್ರ ಕಾರಾಗೃಹ
- ಪ್ರಾಚಾರ್ಯರು ಕಾರಾಗೃಹಗಳ ಸಿಬ್ಬಂದಿ ತರಬೇತಿ ಸಂಸ್ಥೆ, ಮೈಸೂರು.
- ಎಲ್ಲಾ ಅಧೀಕ್ಷಕರುಗಳು, ಪ್ರಭಾರ ಜಿಲ್ಲಾ ಕಾರಾಗೃಹ/ ಉಪ ಕಾರಾಗೃಹ / ಬಯಲು ಬಂದೀಖಾನೆ

<u>ಪ್ರತಿಯನ್ನು ಅಭಿನಂದನೆಗಳೊಂದಿಗೆ:</u> ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.

- ಸರ್ಕಾರದ ಕಾರ್ಯದರ್ಶಿಗಳು, (ಪಿ.ಸಿ.ಎಸ್) ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ:</u>

- ಮಾನ್ಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕ ಕಾರಾಗೃಹಗಳ ಮಹಾನಿರೀಕ್ಷಕರು ರವರ ಆಪ್ತ ಸಹಾಯಕರಿಗೆ.
- ಪೊಲೀಸ್ ಉಪ ಮಹಾನಿರೀಕ್ಷಕರು (ಕಾರಾಗೃಹಗಳು) ಆಪ್ತ ಸಹಾಯಕರಿಗೆ.
- ಸಹಾಯಕ ಅಧೀಕ್ಷಕರು, ಪ್ರಧಾನ ಕಛೇರಿ ಬೆಂಗಳೂರು.
- ಪತ್ರಾಂಕಿತ ವ್ಯವಸ್ಥಾಪಕರು / ವ್ಯವಸ್ಥಾಪಕರು / ಕಛೇರಿ ಅಧೀಕ್ಷಕರುಗಳಿಗೆ.
- ಈ ಕಛೇರಿ ಸಿಬ್ಬಂದಿ ಶಾಖೆಗೆ / ಸಿಬ್ಬಂದಿ 5 ಶಾಖೆಗೆ / ಸಂಶೋಧನಾ ಶಾಖೆಗೆ / ಲೆಕ್ಕಪರಿಶೋಧನೆ ಶಾಖೆಗೆ / ಲೆಕ್ಕಪತ್ರ ಶಾಖೆಗೆ.

(19)

ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕಾರಾಗೃಹ ಇಲಾಖಾ ಅಧಿಕಾರಿ/ಸಿಬ್ಬಂದಿಗಳಿಗೆ ವಾರ್ಷಿಕ ಆರೋಗ್ಯ ತಪಾಸಣೆಗಾಗಿ ರೂ.1000/-ಗಳನ್ನು ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-** ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕದ ಕಾರಾಗೃಹಗಳ ಮಹಾನಿರೀಕ್ಷಕರು ಇವರ ಪತ್ರ ಸಂಖ್ಯೆ: ಆಭಾಯೋ/ಸಿಆರ್-04/2018-19, ದಿನಾಂಕ: 10/04/2018 ಮತ್ತು 02/05/2018.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಪತ್ರಗಳಲ್ಲಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕದ ಕಾರಾಗೃಹಗಳ ಮಹಾನಿರೀಕ್ಷಕರು ಕರ್ನಾಟಕ ರಾಜ್ಯದ ಎಲ್ಲಾ ಕಾರಾಗೃಹಗಳಲ್ಲಿ ದಾಖಿಲಾದ ಭೂಗತ ಪಾತಕಿಗಳು, ನಕ್ಸಲೀಯರು ಹಾಗೂ ಇತ್ಯಾದಿ ಭಯಾನಕ ಆರೋಪಿಗಳ ಭದ್ರತೆಯ ದೃಷ್ಟಿಯಿಂದ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಬಿಡುವಿಲ್ಲದೆ ಕರ್ತವ್ಯ ನಿರ್ವಹಿಸುವ ಸಂದರ್ಭಗಳಲ್ಲಿ ತಮ್ಮ ಆರೋಗ್ಯದ ಕಡೆ ಗಮನ ಹರಿಸದೆ, ದೈಹಿಕ ಹಾಗೂ ಮಾನಸಿಕ ಒತ್ತಡ ಉಂಟಾಗಿ ಅನಾರೋಗ್ಯಕ್ಕೆ ಒಳಗಾಗುತ್ತಿದ್ದು, ನಿಯಮಿತವಾಗಿ ಪ್ರತಿ ವರ್ಷ ಆರೋಗ್ಯ ತಪಾಸಣೆಯ ಅಗತ್ಯವಿರುವುದಾಗಿ ತಿಳಿಸುತ್ತ, ಪೊಲೀಸ್ ಮತ್ತು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಮಂಜೂರು ಮಾಡಿರುವ ಮಾದರಿಯಲ್ಲಿ ಕಾರಾಗೃಹ ಇಲಾಖೆಯ ಐಪಿಎಸ್ ಹಂತದ ಅಧಿಕಾರಿಗಳು ಮತ್ತು ಲಿಪಿಕ ಸಿಬ್ಬಂದಿಗಳನ್ನು ಹೊರತುಪಡಿಸಿ ವಾರ್ಷಿಕ ಆರೋಗ್ಯ ತಪಾಸಣೆಗಾಗಿ ಪ್ರತಿ ಅಧಿಕಾರಿ/ಸಿಬ್ಬಂದಿಗಳಿಗೆ ರೂ.1000/-ಗಳ ವೆಚ್ಚವನ್ನು ಆಯಾ ಆರ್ಥಿಕ ವರ್ಷಕ್ಕೆ ಲೆಕ್ಕಶೀರ್ಷಿಕೆ 2056-00-101-1--01-021 ವೈದ್ಯಕೀಯ ವೆಚ್ಚ ಮರುಪಾವತಿಯಡಿ ಒದಗಿಸಲಾಗುವ ಅನುದಾನದಲ್ಲಿ ಭರಿಸಲು ಖಾಯಂ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 43 ಪಿಆರ್‌ಇ 2018**
**ಬೆಂಗಳೂರು, ದಿನಾಂಕ: 5/7/2018**

7.7.2018
A.D.G.P.
Prisons

ಕಾರಾಗೃಹ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳಿಗೆ (ಐಪಿಎಸ್ ಹಂತದ ಅಧಿಕಾರಿಗಳು ಮತ್ತು ಲಿಪಿಕ ಸಿಬ್ಬಂದಿಗಳನ್ನು ಹೊರತುಪಡಿಸಿ) ಪ್ರತಿಯೊಬ್ಬರಿಗೆ ಆರೋಗ್ಯ ತಪಾಸಣೆಗಾಗಿ ವಾರ್ಷಿಕ ರೂ.1000/-ಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮಂಜೂರು ಮಾಡಿದೆ.

7/7/18
Circulate to all Jails.
7.7.18

ಪ್ರಸ್ತಾವನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2056-00-101-0-01 ಸೆರೆಮನೆಗಳು 021 ವೈದ್ಯಕೀಯ ವೆಚ್ಚದ ಮರುಪಾವತಿಯಡಿ ಲಭ್ಯವಿರುವ ಅನುದಾನದಲ್ಲಿ ಭರಿಸತಕ್ಕದ್ದು.

1892 | 913
677 | 7/7

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 263 ವೆಚ್ಚ-11/2018, ದಿನಾಂಕ: 28/6/2018ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M.R. Shobha
(ಎಂ.ಆರ್.ಶೋಭಾ)
ಸರ್ಕಾರದ ಅಧೀನ ಕಾರ್ಯದರ್ಶಿ
ಒಳಾಡಳಿತ ಇಲಾಖೆ (ಸೆರೆಮನೆ ಮತ್ತು ಸಿನಿಮಾ)

ಗೆ,

1] ಮಹಾಲೇಖಪಾಲರು (ಜಿ&ಎಸ್ಎಸ್ಎ, ಇ & ಆರ್ಎಸ್ಎ, ಎ&ಇ), ಕರ್ನಾಟಕ ಬೆಂಗಳೂರು.
2] ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು ಮತ್ತು ಕರ್ನಾಟಕ ಕಾರಾಗೃಹಗಳ ಮಹಾನಿರೀಕ್ಷಕರವರ ಕಛೇರಿ, ಶೇಷಾದ್ರಿ ರಸ್ತೆ, ಬೆಂಗಳೂರು.
3] ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

ಪ್ರತಿ :-

1] ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಗೃಹ ಸಚಿವರ ಆಪ್ತ ಕಾರ್ಯದರ್ಶಿಯವರು.
2] ಸರ್ಕಾರದ ಕಾರ್ಯದರ್ಶಿಗಳು (ಪಿಸಿಎಎಸ್), ಇವರ ಆಪ್ತ ಕಾರ್ಯದರ್ಶಿ, ಒಳಾಡಳಿತ ಇಲಾಖೆ.
3] ಸರ್ಕಾರದ ಉಪ ಕಾರ್ಯದರ್ಶಿಗಳು (ಅಪರಾಧಗಳು ಹಾಗೂ ಸೆರೆಮನೆ ಮತ್ತು ಸಿನಿಮಾ), ಇವರ ಆಪ್ತ ಸಹಾಯಕರು, ಒಳಾಡಳಿತ ಇಲಾಖೆ.
4] ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಜಿಪಂ)
5] ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ(ಸಮನ್ವಯ) ಇವರ ಆಪ್ತ ಸಹಾಯಕರು.
6] ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.